# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

**ದಿನಾಂಕ: 03–04–2018**

**ಪ್ರಕಟಣೆಯ ಕೃಪೆಗಾಗಿ............**

**ವಿಜಯಪುರ:** ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇನಾಲಯ, ರಾಜ್ಯಶಾಸ್ತ್ರ ವಿಭಾಗ, ವಿದ್ಯಾರ್ಥಿನಿಯರ ಒಕ್ಕೂಟ ಮತ್ತು ಬೆಂಗಳೂರಿನ ಸಮಾಜಮುಖಿ ಮಾಸಪತ್ರಿಕೆ ಇವರ ಸಂಯುಕ್ತಾಶ್ರಯದಲ್ಲಿ ಇದೇ 4ರಂದು ಬೆಳಿಗ್ಗೆ 11.00 ಗಂಟೆಗೆ 'ಚುನಾವಣೆ ಯಾರ ಹೊಣೆ' ಕುರಿತ ಒಂದು ದಿನದ ವಿಚಾರ ಸಂಕಿರಣವನ್ನು ಹಮ್ಮಿಕೊಳ್ಳಲಾಗಿದೆ.

ಮಹಿಳಾ ವಿವಿ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಆಯೋಜಿಸಿರುವ ಈ ಕಾರ್ಯಕ್ರಮವನ್ನು ಬೆಂಗಳೂರಿನ ಮಾಧ್ಯಮ ಅಕಾಡೆಮಿ ಅಧ್ಯಕ್ಷ ಎಂ. ಸಿದ್ದರಾಜು ಉದ್ಘಾಟಿಸಲಿದ್ದಾರೆ. ನಗರದ ಚಾಣಕ್ಯ ಕರಿಯರ್ ಅಕಾಡೆಮಿ ಮುಖ್ಯಸ್ಥ ಎನ್.ಎಂ. ಬಿರಾದಾರ ಹಾಗೂ ಬೆಂಗಳೂರಿನ ಸಮಾಜಮುಖಿ ಮಾಸಪತ್ರಿಕೆಯ ಕಾರ್ಯಕಾರಿ ಸಂಪಾದಕ ಚಂದ್ರಶೇಖರ ಬೆಳೆಗೆರೆ ಮುಖ್ಯ ಅಥಿತಿಗಳಾಗಿ ಆಗಮಿಸಲಿದ್ದಾರೆ. ಮಹಿಳಾ ವಿವಿ ಕುಲಪತಿ ಪ್ರೊ.ಸಬಿಹಾ ಅಧ್ಯಕ್ಷತೆ ವಹಿಸುವರು.

ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇನಾಲಯದ ನಿರ್ದೇಶಕ ಪ್ರೊ.ಓಂಕಾರ ಕಾಕಡೆ, ಸಮಾಜಮುಖಿ ಮಾಸಪತ್ರಿಕೆ ಸಹಾಯಕ ಸಂಪಾದಕ ಬಸವರಾಜ ಭೂಸಾರೆ, ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇನಾಲಯದ ಸಹಾಯಕ ನಿರ್ದೇಶಕ ಡಾ.ಹನುಮಂತಯ್ಯ ಪೂಜಾರಿ, ರಾಜ್ಯಶಾಸ್ತ್ರ ವಿಭಾಗದ ಸಂಯೋಜಕ ಡಾ.ಆರ್.ವಿ. ಗಂಗಶೆಟ್ಟಿ ಈ ಮೂಲಕ ಜಂಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.